ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 2022 (2332)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್.ಎಂ.ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿ ಪರಿಸ್ಥಿತಿ ಸಚಿವರು

ವಿಷಯ : ನಾಡಪ್ರಭು ಕೆಂಪೇಗೌಡರು ಕಟ್ಟಿದ ಹುತ್ರಿದುರ್ಗವು ಅಭಿವೃದ್ಧಿ ಕಾಣದೇ ಇರುವ ಕುರಿತು

(ಅ) ನಾಡಪ್ರಭು ಕೆಂಪೇಗೌಡರು ಕಟ್ಟಿದ ನವದುರ್ಗಗಳಲ್ಲಿ ಒಂದಾದ "ಹುತ್ರಿದುರ್ಗವು" ಅಭಿವೃದ್ಧಿ ಕಾಣದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಹಾಗೂ ಪ್ರವಾಸೋದ್ಯಮ ಇಲಾಖೆ ಕೈಗೊಂಡ ಕಾರ್ಯಕ್ರಮಗಳೇನು ;

(ಆ) ಹುತ್ರಿದುರ್ಗದ ಅಭಿವೃದ್ಧಿಗೆ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; ಖರ್ಚಾದ ಅನುದಾನವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಹುತ್ರಿದುರ್ಗ ಗ್ರಾಮವನ್ನು ಅಭಿವೃದ್ಧಿಪಡಿಸಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಹೊಸ ಹೊಸ ಯೋಜನೆಗಳನ್ನು ರೂಪಿಸುವಲ್ಲಿ ಸರ್ಕಾರದ ನಿಲುವೇನು ? (ಸಂಪೂರ್ಣ ವಿವರ ನೀಡುವುದು)